ದಿಃ 22-03-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

(ಸಾಕ್ಷಿಗೆ ಕನ್ನಡ ಭಾಷೆ ಬರುವುದಿಲ್ಲ ಎಂದು ವಕೀಲರು ಹೇಳಿದ ಕಾರಣ ಹಿಂದಿ (ಮರಾಠಿ) ಭಾಷೆ ಮತ್ತು ಕನ್ನಡ ಮತ್ತು ಇಂಗ್ಲೀಷ್ ಭಾಷೆ ತಿಳಿದಿದೆ ಎಂದು ಹೇಳಿರುವ ವಕೀಲರಾದ ಶ್ರೀ ಆರ್.ಪಿ.ಎಂ. ರವರನ್ನು ತರ್ಜುಮೆದಾರರಾಗಿ ನೇಮಕ ಮಾಡಿದ್ದು ಸದರಿಯವರು ಪ್ರತಿವಾದಿಯರ ಪರ ವಕೀಲರು ಕನ್ನಡದಲ್ಲಿ ಕೇಳಿದ ಪ್ರಶ್ನೆಗಳನ್ನು ಮರಾಠಿಗೆ ತರ್ಜುಮೆ ಮಾಡಿ ಸಾಕ್ಷಿಗೆ ಹೇಳಲು, ಸಾಕ್ಷಿಯು ಮರಾಠಿಯಲ್ಲಿ ಹೇಳಿದ ಉತ್ತರವನ್ನು ಕನ್ನಡಕ್ಕೆ ತರ್ಜುಮೆ ಮಾಡಿ ಹೇಳಲು ಒಪ್ಪಿಕೊಂಡಿರುತ್ತಾರೆ. ರೂ.200/- ನ್ನು ತರ್ಜುಮೆದಾರರ ಫೀ ಎಂದು ನಿಗದಿಪಡಿಸಿದ್ದು ವಾದಿಯು ಸದರಿ ಫೀಯನ್ನು ನೀಡಲು ಆದೇಶಿಸಲಾಗಿದೆ.)

**ಪಾಟೀ ಸವಾಲು ಪ್ರತಿವಾದಿಯರ ಪರ ವಕೀಲರಾದ ಶ್ರೀ ಯು.ಬಿ.ಎಂ. ರವರಿಂದಃ-**

ನಾನು ಬಿ.ಕಾಂ ಪಧವೀಧರನಾಗಿದ್ದೇನೆ. ನಾನು ಹುಟ್ಟಿದ ದಿನಾಂಕ 19.08.1985. 2 ನೇ ವಾದಿಯು ಐ.ಟ.ಐ ಓದಿರುತ್ತಾನೆ. ಆತನ ಹುಟ್ಟಿದ ದಿನಾಂಕ ನನಗೆ ಗೊತ್ತಿಲ್ಲ. ನನ್ನ ಶಿಕ್ಷಣ ಮರಾಠಿ ಮಾಧ್ಯಮದಲ್ಲಿ ಆಗಿರುತ್ತದೆ. ನಾನು ಮತ್ತು ನನ್ನ ಸಹೋದರ ಕಂಗ್ರಾಳಿ ಕೆ.ಹೆಚ್. ಬೆಳಗಾವಿಯಲ್ಲಿ ವಾಸವಾಗಿದ್ದೇವೆ ಎಂದರೆ ಸರಿ. ಸದರಿ ಊರಿನಲ್ಲಿ ನಾವು ಹುಟ್ಟಿದಾಗಿನಿಂದಲೂ ವಾಸವಾಗಿದ್ದೇವೆ. ಉತಾರುವಿನಲ್ಲಿ ಗ್ರಾಮ ಲೆಕ್ಕಾಧಿಕಾರಿಯಮ ಯಾವ ಬೆಳೆಗಳು ಎನ್ನುವ ಬಗ್ಗೆ ನಮೂದು ಮಾಡುತ್ತಾರೆ, ಅದನ್ನು ತಹಶೀಲ್ದಾರ್ ರವರು ಅನುಮೋದನೆ ಮಾಡುತ್ತಾರೆ ಎಂದರೆ ಸಾಕ್ಷಿಯು ನನಗೆ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ. ವಾದ ಪತ್ರದಲ್ಲಿ ದಾವಾ ಸರ್ವೆ ನಂ.22/2 ವ್ಯವಸಾಯದ ಜಮೀನು ಎಂದು ಬರೆದಿರುತ್ತದೆ ಎಂದರೆ ಸರಿ. ಸದರಿ ಜಮೀನಿನಲ್ಲಿ ಯಾವ ಬೆಳೆಗಳನ್ನು ಬೆಳೆಯುತ್ತೀರಿ ಎಂದು ಕೇಳಿದ ಪ್ರಶ್ನೆಗೆ ಸಾಕ್ಷಿಯು ಅದು ಖಾಲಿ ಇದೆ ಎಂದು ನುಡಿಯುತ್ತಾರೆ. ದಾವಾ ಸ್ವತ್ತು ಕೃಷಿ ಜಮೀನು ಎನ್ನುವುದಕ್ಕೆ ಯಾವುದೇ ದಾಖಲೆಯನ್ನು ನ್ಯಾಯಾಲಯದ ಮುಂದೆ ಹಾಜರು ಪಡಿಸಿಲ್ಲ ಎಂದರೆ ಸಾಕ್ಷಿಯು ಹಾಜರುಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ನಾನು ಯಾವುದೇ ಉತಾರುವನ್ನು ಹಾಜರು ಮಾಡಿಲ್ಲ ಎಂದರೆ ಸರಿಯಲ್ಲ.

**2.** ದಾವೆಯಲ್ಲಿರುವ ದಾವಾ ಸ್ವತ್ತು ಕೃಷಿ ಜಮೀನು ಆಗಿರಲಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಮನೆ ಮತ್ತು ಖುಲ್ಲಾ ಜಾಗ ಇದೆ ಎಂದರೆ ಸಾಕ್ಷಿಯು ಪೂರ್ತಿ ಖುಲ್ಲಾ ಜಾಗ ಇದೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಯು 7 ಗುಂಟೆ ಇದೆ ಎಂದರೆ ಸರಿ. ಸಾಕ್ಷಿಗೆ ಒಂದು ಭಾವಚಿತ್ರವನ್ನು ತೋರಿಸಲಾಗಿ ಅದರಲ್ಲಿ ಕಾಣಿಸುತ್ತಿರುವ ಎರಡು ಮನೆ ಮತ್ತು ಖುಲ್ಲಾ ಜಾಗ ಸೇರಿ 7 ಗುಂಟೆ

ದಾವಾ ಆಸ್ತಿ ಇದೆ ಎಂದರೆ ಸಾಕ್ಷಿಯು ಸದರಿ ಭಾವಚಿತ್ರದಲ್ಲಿ ಕಾಣಿಸುತ್ತಿರುವ ಮನೆಗಳನ್ನು ಬಿಟ್ಟು ತೆಂಗಿನ ಮರದಿಂದ ಖುಲ್ಲಾ ಇರುವ ಜಾಗವು 7 ಗುಂಟೆ ಇದೆ ಎಂದು ನುಡಿಯುತ್ತಾರೆ. ಸದರಿ 7 ಗುಂಟೆ ಜಾಗದಲ್ಲಿ ಎರಡು ಮನೆಗಳನ್ನು ಪ್ರತಿವಾದಿಯು ಕಟ್ಟಿದ್ದು, ಖುಲ್ಲಾ ಜಾಗವನ್ನು ಬಿಟ್ಟಿರುತ್ತಾರೆ, ಅದೂ ಸಹ ಅವರಿಗೆ ಸೇರಿದ್ದು ಎಂದರೆ ಸರಿಯಲ್ಲ. ದಾವಾ ಆಸ್ತಿಯ ಪೂರ್ವಕ್ಕೆ, ಪಶ್ಚಿಮಕ್ಕೆ ಮತ್ತು ಉತ್ತರಕ್ಕೆ ಕಟ್ಟಡಗಳು ಇವೆ ಎಂದರೆ ಸರಿ. ಅವುಗಳೆಲ್ಲಾ ವಾಸವಾಗಿರುವ ಕಟ್ಟಡಗಳು ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ದಾವಾ ಸ್ವತ್ತಿನ ದಕ್ಷಿಣಕ್ಕೆ 10 ಅಡಿ ಅಗಲದ ರಸ್ತೆ ಇದೆ ಎಂದರೆ ಸರಿ. ದಾವಾ ಸ್ವತ್ತಿನ ಸುತ್ತಲೂ ಇರುವ ಕಟ್ಟಡಗಳಿಗೆ ಪಂಚಾಯಿತಿಯವರು ನಂಬರ್ ಗಳನ್ನು ಕೊಟ್ಟಿರುತ್ತಾರೆ ಎಂದರೆ ಸಾಕ್ಷಿಯು ಕೊಟ್ಟಿರಬಹುದು, ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

**3.** ದಾವಾ ಆಸ್ತಿಯಿಂದ ನಾನು ವಾಸವಿರುವ ಮನೆಗೆ ಅರ್ಧ ಕಿಲೋಮೀಟರ್ ಆಗುತ್ತದೆ. ದಾವಾ ಆಸ್ತಿಯು ಕಂಗ್ರಾಳಿ ಕೆ.ಹೆಚ್. ಗ್ರಾಮ ಪಂಚಾಯಿತಿ ವ್ಯಾಪ್ತಿಯೊಳಗೆ ಬರುತ್ತದೆ ಎಂದರೆ ಸರಿ. ದಾವಾ ಆಸ್ತಿಗೆ ಗ್ರಾಮ ಪಂಚಾಯಿತಿಯವರು 1/ಎ ಎಂದು ನಂಬರ್ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಯು 37 ವರ್ಷಗಳಿಂದ ಎರಡು ಮನೆಗಳನ್ನು ಕಟ್ಟಿಕೊಂಡು ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ. ವಾದ ಪತ್ರದಲ್ಲಿ ನಮೂದಿಸಿರುವ ದಾವಾ ಆಸ್ತಿಯ ಪೂರ್ವಕ್ಕೆ ಸಂಜಯ್ ಬಾಬು ಕಾಂಬ್ಳೆ ರವರ ಆಸ್ತಿಯ ನಂಬರ್ ನನಗೆ ಗೊತ್ತಿಲ್ಲ. ಸದರಿ ಸಂಜಯ್ ಬಾಬು ಕಾಂಬ್ಳೆ ರವರ ಆಸ್ತಿ ಎಂದರೆ ಮನೆ ಇದೆ ಎಂದರೆ ಸರಿ. ಪಶ್ಚಿಮಕ್ಕೆ ಶಂಕರ್ ಪಾಟೀಲ್ ಎನ್ನುವವರ ಆಸ್ತಿ ಅಂದರೆ ಅವರ ಮನೆ ಇದೆ ಎಂದರೆ ಸರಿ. ಉತ್ತರಕ್ಕೆ ಕಲ್ಪತ್ರಿ ರವರ ಆಸ್ತಿ ಅಂದರೆ ಅವರ ಮನೆ ಇದೆ ಎಂದರೆ ಸರಿ. ಸದರಿ ಕಲ್ಪತ್ರಿ ರವರ ಮನೆ ದಾವಾ ಆಸ್ತಿಯಲ್ಲಿಯೇ ಇದೆ, ನಾನು ದಾವಾ ಆಸ್ತಿಯ ಉತ್ತರ ದಿಕ್ಕಿನಲ್ಲಿದೆ ಎಂದು ತಪ್ಪಾಗಿ ನಮೂದಿಸಿರುತ್ತೇನೆ ಎಂದರೆ ಸರಿಯಲ್ಲ.

**4.** ದಾವಾ ಆಸ್ತಿಯ ಬಗ್ಗೆ 1981 ರಿಂದ ಇಲ್ಲಿಯವರೆಗೆ ಕಂದಾಯ ಪಾವತಿ ಮಾಡಿರುವ ಬಗ್ಗೆ ನಿಪಿ.4 ಮತ್ತು 5ನ್ನು ಹೊರತುಪಡಿಸಿ ಬೇರೆ ಕಂದಾಯ ಪಾವತಿ ಮಾಡಿರುವ ರಶೀದಿ ಇಲ್ಲ ಎಂದರೆ ಸಾಕ್ಷಿಯು ಇದೆ ಎಂದು ನುಡಿಯುತ್ತಾರೆ. ಅವುಗಳನ್ನು ನ್ಯಾಯಾಲಯಕ್ಕೆ ಹಾಜರು ಮಾಡಲು ನಿಮಗೇನು ಯಾವುದೇ ಅಡಚಣೆ ಇಲ್ಲ ಎಂದರೆ ಸಾಕ್ಷಿಯು ಹಾಜರು ಮಾಡುತ್ತೇನೆ ಎಂದು ನುಡಿಯುತ್ತಾರೆ. 1982 ರಲ್ಲಿ ದಾವಾ ಆಸ್ತಿಯಲ್ಲಿ ಮನೆಗಳನ್ನು ಕಟ್ಟಿದ ಬಗ್ಗೆ ಪಂಚಾಯಿತಿಯವರು ತೆರಿಗೆಯನ್ನು ತೆಗೆದುಕೊಳ್ಳುತ್ತಿದ್ದಾರೆ ಎಂದರೆ ಸರಿಯಲ್ಲ.

ಈಗಾಗಲೇ ನ್ಯಾಯಾಲಯದ ಸಮಯ ಆಗಿದ್ದರಿಂದ ಮುಂದುವರೆದ ಸಾಕ್ಷಿಯ ಪಾಟೀ ಸವಾಲಿಗೆ ಸಮಯವಕಾಶ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ ಸರಿಯಿದೆ.

ಸಹಿ/-

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಧೀಶರು,

ಬೆಳಗಾವಿ.